ತಾಕೂರು ಬಳಿಯಿರುವ ಸೇತುವೆಗಳು ಸುಗಮ ವಾಹನ ಸಂಚಾರಕ್ಕೆ ಯೋಗ್ಯವಾಗಿ ಇಲ್ಲದೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ, ಈ ಸೇತುವೆಗಳ ಪುನರ್ ನಿರ್ಮಾಣಕ್ಕೆ ಸರ್ಕಾರ ಕೈಗೊಂಡ ಕ್ರಮವೇನು,

ಇ) ಸದರಿ ಯೋಜನೆಗೆ ಮಂಜೂರು ಮಾಡಿದ ಹಣ ಎಷ್ಟು (ವಿವರ ಒದಗಿಸುವುದು)?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಹಾಗೂ ಇಂಧನ ಸಚಿವರು)

ಅ) ಬಂದಿದೆ

ಆ) ಈ ಸೇತುವೆಗಳನ್ನು ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದಿಂದ ಕೈಗೊಳ್ಳಲಾಗುವ 4ನೇ ಹಂತದ ಸೇತುವೆಗಳ ನಿರ್ಮಾಣದ ಯೋಜನೆ ಅಡಿಯಲ್ಲಿ ಸೇರಿಸಲು ಪರಿಶೀಲಿಸಲಾಗುತ್ತಿದ್ದು, ಸೇತುವೆಗಳ ನಿರ್ಮಾನ/ಪುನರ್ ನಿರ್ಮಾಣವನ್ನು ಅನುದಾನದ ಲಭ್ಯತೆಗನುಸಾರವಾಗಿ ಹಾಗೂ ಕಾಮಗಾರಿಯ ಆದ್ಯತೆ ಮೇರೆಗೆ ಹಂತ ಹಂತವಾಗಿ ಕೈಗೊಳ್ಳಲಾಗುವುದು

ಇ) ಸದರಿ ಪ್ರಸ್ತಾವನೆಗಳನು ಪರಿಶೀಲನೆಯ ಹಂತದಲ್ಲಿ ಇರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ

325 (347) ಶ್ರೀಮತಿ ಭಾಗೀರಥಿ ಟಿ (ಕೊಟ್ಟೂರು) ಮಾನ್ಯ ಸಾರಿಗೆ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಟ್ಟೂರು ಬಸ್ ನಿಲ್ದಾಣ, ಬಸ್ ಶೆಲ್ಟರ್ಸ್, ಸಾರ್ವಜನಿಕರಿಗೆ ಕುಳಿತುಕೊಳ್ಳಲು ಸ್ಥಳವಿಲ್ಲದಿರುವುದು ಇನ್ನೂ ಅನೇಕ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ ಈ ಎಲ್ಲಾ ಸುಧಾರಣೆಗಳಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು,

ಇ) ಈ ಸಮಸ್ಯೆಗಳನ್ನು ಪರಿಹರಿಸುವ ಕಾಮಗಾರಿಗಳಿಗಾಗಿ ಕಾಯ್ದಿರಿಸಿರುವ ಅನುದಾನ ಎಷ್ಟು?

ಶ್ರೀ ಎಸ್ ಚಲುವರಾಯಸ್ವಾಮಿ (ಸಾರಿಗೆ ಸಚಿವರು)

ಅ) ಬಂದಿದೆ

ಆ) ಪ್ರಯಾಣಿಕರಿಗೆ ಆಸನ ವ್ಯವಸ್ಥೆಯನ್ನು ಒದಗಿಸುವುದರ ಜೊತೆಗೆ ನೆಲಹಾಸನ್ನು ಉತ್ತಮಪಡಿಸಲು ಕಾಮಗಾರಿಗಳನ್ನು ತೆಗೆದುಕೊಳ್ಳುವ ಬಗ್ಗೆ ಕ್ರಮ ಕೈಗೊಳ್ಳಲಾಗಿದೆ

ಇ) ರೂ 8 00 ಲಕ್ಷಗಳನ್ನು ಕಾಯ್ದಿರಿಸಲಾಗಿದೆ

326 (656) ಶ್ರೀ ಬೋಪಯ್ಯ ಕೆ ಜಿ (ಮಡಿಕೇರಿ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲೆಯಲ್ಲಿ ಹೆಚ್ಚು ಮಳೆಯಾಗುವುದರಿಂದ ರಸ್ತೆ ಮತ್ತು ಸೇತುವೆಗಳ ನಿರ್ಮಾಣಕ್ಕಾಗಿ ಪ್ರತ್ಯೇಕ ರಸ್ತೆ ನಿಧಿ ಸ್ಥಾಪಿಸಬೇಕೆಂಬ ನಂಜುಂಡಪ್ಪ ವರದಿಯಲ್ಲಿ ತಿಳಿಸಿರುವುದು ಸರ್ಕಾರಕ್ಕೆ ಗೊತ್ತಿದೆಯೇ,

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದ ನಿಲುವೇನು ಮತ್ತು ಕೈಗೊಂಡ ಕ್ರಮವೇನು?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಹೌದು

ಆ) ಕೊಡಗು ಜಿಲ್ಲೆಯ 410 24 ಕಿಮೀ ಉದ್ದದ ರಾಜ್ಯ ಹೆದ್ದಾರಿಯನ್ನು ರೂ 1592 66 ಲಕ್ಷ ಮೊತ್ತ ಅಂದಾಜಿನಲ್ಲಿ 3 ವರ್ಷಗಳ ನಿರ್ವಹಣೆಯನ್ನು (2005–2008) ಕೈಗೆತ್ತಿಕೊಳ್ಳಲಾಗಿದೆ 2006–07ನೇ ಸಾಲಿಗೆ ಕೊಡಗು ಜಿಲ್ಲೆಯ 807 00 ಕಿಮೀ ಉದ್ದದ ಜಿಲ್ಲಾ ಮುಖ್ಯ ರಸ್ತೆಯ ದುರಸ್ತಿ ನಿರ್ವಹಣೆ ಅಭಿವೃದ್ಧಿಗಾಗಿ ಲೆಕ್ಕ ಶೀರ್ಷಿಕೆ 3054–12ನೇ ಹಣಕಾಸು ಅಡಿಯಲ್ಲಿ ರೂ 307 20 ಲಕ್ಷ ಮತ್ತು ಅನುದಾನ ಬಿಡುಗಡೆ ಮಾಡಿ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ

327 (657) ಶ್ರೀ ಬೋಪಯ್ಯ ಕೆ ಜಿ (ಮಡಿಕೇರಿ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೇಂದ್ರ ರಸ್ತೆ ನಿಧಿ ಯೋಜನೆಯಡಿ ಮಡಿಕೇರಿ ವಿಧಾನ ಸಭಾ ಕ್ಷೇತ್ರಕ್ಕೆ ಸಂಬಂಧಪಟ್ಟಂತೆ ಸಲ್ಲಿಸಲಾಗಿರುವ ಪ್ರಸ್ತಾವನೆಗಳೆಷ್ಟು,

ಆ) ಈ ಯೋಜನೆಯಡಿ ಬಿಡುಗಡೆಯಾಗಿರುವ ಹಣ ಎಷ್ಟು (ವಿವರ ಗಳನ್ನು ನೀಡುವುದು)?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಕೇಂದ್ರ ರಸ್ತೆ ನಿಧಿ ಯೋಜನೆಯಡಿ ಮಡಿಕೇರಿ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಪಟ್ಟಂತೆ ಸಲ್ಲಿಸಲಾಗಿರುವ ಪ್ರಸ್ತಾವನೆಗಳ ವಿವರ ಈ ಕೆಳಕಂಡಂತಿದೆ